**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ/441/ಗ್ರಾಪಂಅ/2016 (ಭಾಗ-1)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 23-06-2016

**ಸುತ್ತೋಲೆ-1**

**ವಿಷಯ:** ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ವಿತರಿಸಲು ಮೊದಲು ಬಂದ ಅರ್ಜಿಯನ್ನು ಸ್ವೀಕೃತಿ ದಿನಾಂಕದ ಆಧಾರದ ಮೇಲೆ ಮೊದಲು ಇತ್ಯರ್ಥಪಡಿಸುವ (First In First out- FIFO) ಬಗ್ಗೆ.

**ಉಲ್ಲೇಖ:**
1) ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 83 ಗ್ರಾಪಂಅ 2013, ದಿನಾಂಕ:14-06-2013.
2) ಸರ್ಕಾರದ ಸೇರ್ಪಡೆ ಅಧಿಸೂಚನೆ ಸಂಖ್ಯೆ:ಗ್ರಾಅಪ 83 ಗ್ರಾಪಂಅ 2013, ದಿನಾಂಕ:15-06-2013.
3) ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 83 ಗ್ರಾಪಂಅ 2013,(ಭಾಗ-6) ದಿನಾಂಕ:21-01-2014.
4) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013,(ಭಾಗ-6) ದಿನಾಂಕ:03-02-2014.
5) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 04 ಗ್ರಾಪಂಕಾ 2016 ದಿನಾಂಕ:25-02-2016.

---

ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ಕ್ಕೆ ಸಂಬಂಧಿಸಿದಂತೆ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) (ತಿದ್ದುಪಡಿ) ನಿಯಮಗಳು, 2013 ರಲ್ಲಿ ನಿಯಮ 28 ಮತ್ತು 30 ಕ್ಕೆ ದಿನಾಂಕ:14-06-2013 ಮತ್ತು ದಿನಾಂಕ:15-06-2013 ರಲ್ಲಿ ತಿದ್ದುಪಡಿ ತರಲಾಗಿದ್ದು, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಈ ಕೆಳಕಂಡ ಕ್ರಮಬದ್ಧ ಆಸ್ತಿಗಳಿಗೆ ನಿಗಧಿತ ನಮೂನೆ 9 ಹಾಗೂ 11 ಎ ರಲ್ಲಿ ದಾಖಲಿಸಲು ದಿನಾಂಕ:15-06-2013 ರಿಂದ ರಾಜ್ಯದ ಗ್ರಾಮ ಪಂಚಾಯತಿಗಳು ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 ಮತ್ತು 11 ಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಯ ಡಿಜಿಟಲ್ ಸಹಿಯ ಮೂಲಕ ವಿತರಿಸುತ್ತಿವೆ. ಉಲ್ಲೇಖ (5) ರ ಸರ್ಕಾರದ ಸುತ್ತೋಲೆಯಲ್ಲಿ ನಮೂನೆ-9 ಮತ್ತು ನಮೂನೆ 11ಎ ಹಾಗೂ 11ಬಿ ಗಳನ್ನು ಯಾವ ವರ್ಗದ ಆಸ್ತಿಗಳಿಗೆ ವಿತರಿಸಬೇಕು ಎಂಬುದರ ಬಗ್ಗೆ ಸವಿವರವಾಗಿ ತಿಳಿಸಲಾಗಿದೆ.

ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು (ತೆರಿಗೆ ನಿರ್ಧರಣೆ ಪಟ್ಟಿ) ವಿತರಿಸಲು ಗ್ರಾಮ ಪಂಚಾಯತಿ ಸಭೆಯ ಅನುಮೋದನೆ ಅಗತ್ಯವಿದ್ದು, ಸದರಿ ಸಭೆಯನ್ನು ನಿಯಮಿತವಾಗಿ ಮತ್ತು ತ್ವರಿತವಾಗಿ ಮಾಡದ ಕಾರಣ ಮತ್ತು ಅರ್ಜಿಗಳನ್ನು ಜೇಷ್ಠತೆ ಆಧಾರದಲ್ಲಿ ವಿಲೇ ಮಾಡದಿರುವುದರಿಂದ ನಮೂನೆಗಳನ್ನು ವಿತರಿಸಲು ವಿಳಂಬವಾಗುತ್ತಿದ್ದು, ಮೊದಲು ಬಂದ ಅರ್ಜಿಯನ್ನು ಸ್ವೀಕೃತಿ ದಿನಾಂಕದ ಆಧಾರದ ಮೇಲೆ ಮೊದಲು ಇತ್ಯರ್ಥಪಡಿಸಲು (First In First Out-FIFO) ಕ್ರಮ ವಹಿಸುವಂತೆ ಹಾಗೂ ಸಕಾರಣವಿಲ್ಲದೆ ಅರ್ಜಿಗಳನ್ನು ತಿರಸ್ಕರಿಸುವುದು ಮತ್ತು ವಿಲೇ ಇಡದಂತೆ ಸೂಚಿಸಿದೆ.

ಮುಂದುವರೆದು, ಸಕಾರಣವಿಲ್ಲದೆ ಅರ್ಜಿಗಳನ್ನು ತಿರಸ್ಕರಿಸಿದ್ದಲ್ಲಿ ಅಥವಾ ವಿಲೇ ಇಟ್ಟಲ್ಲಿ ಸಂಬಂಧಿಸಿದ ಗ್ರಾಮ ಪಂಚಾಯತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವಿರುದ್ಧ ಕರ್ನಾಟಕ ಸಿವಿಲ್ ಸೇವಾ (ಸಿ.ಸಿ.ಎ) ನಿಯಮಗಳು, 1957 ರನ್ವಯ ನಿಯಮಾನುಸಾರ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಶಿಸ್ತು ಕ್ರಮ ಜರುಗಿಸುವಂತೆ ಹಾಗೂ ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ವಿರುದ್ಧ ದುರ್ವತನೆ ಎಂದು ಪರಿಗಣಿಸಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರಡಿ ಗ್ರಾಮ ಪಂಚಾಯತಿ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಸಹ ಸೂಚಿಸಿದೆ.

ಸರ್ಕಾರವು ಆಗಿಂದ್ದಾಗೆ ಹೊರಡಿಸುವ ನಿಯಮಗಳು, ಸುತ್ತೋಲೆಗಳು, ಪತ್ರಗಳಲ್ಲಿನ ನಿರ್ದೇಶನಗಳ ಅನುಸಾರ ಗ್ರಾಮ ಪಂಚಾಯತಿಗಳು ಇ-ಸ್ವತ್ತು ತಂತ್ರಾಂಶದ ಮೂಲಕ ಆಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ-9, 11ಎ ಮತ್ತು 11ಬಿ ಗಳನ್ನು ವಿತರಿಸಲು ಕ್ರಮ ಕೈಗೊಳ್ಳತಕ್ಕದ್ದು. ಇ-ಸ್ವತ್ತು ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಆದೇಶಗಳು, ಸುತ್ತೋಲೆಗಳು ಮತ್ತು ಪತ್ರಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ವೆಬ್‌ಸೈಟ್ ವಿಳಾಸ:rdpr.kar.nic.in ನಲ್ಲಿ ಅಳವಡಿಸಲಾಗುತ್ತಿದೆ.

ಆದ್ದರಿಂದ ಗ್ರಾಮ ಪಂಚಾಯತಿಗಳು ತಪ್ಪದೆ ತೆರಿಗೆ ನಿರ್ಧರಣೆ ಪಟ್ಟಿ ರಿಜಿಸ್ಟರ್ (ನಮೂನೆ-9, 11ಬಿ) ಭೂಮಿ ಮತ್ತು ಕಟ್ಟಡದ ತೆರಿಗೆಗಳ ಬೇಡಿಕೆ ಮತ್ತು ವಸೂಲಿ ರಿಜಿಸ್ಟರ್ (ನಮೂನೆ-11ಎ) ಗಳನ್ನು ಕಡ್ಡಾಯವಾಗಿ ನಿರ್ವಹಿಸುವಂತೆ ಸೂಚಿಸಿದೆ.

ಮೇಲ್ಕಂಡ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳಿಗೆ ಮತ್ತೊಮ್ಮೆ ತಿಳಿಸಿದೆ.

(ಟಿ.ವಿ. ಅರುಣ್‌ಕುಮಾರ್) 23/1
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಗೆ:**

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
2. ಮಾನ್ಯ ಮೀನುಗಾರಿಕೆ ಮತ್ತು ಬಂದರು ಸಚಿವರ ಆಪ್ತ ಕಾರ್ಯದರ್ಶಿಯವರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
4. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.